1012 (1623) ಶ್ರೀ ಅಭಯಚಂದ್ರ ಕೆ. (ಮೂಡಬಿದ್ರೆ) : ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೇಂದ್ರ ಸರ್ಕಾರದಿಂದ ಬೀಡಿ ಕಾರ್ಮಿಕರಿಗೆ ಮನೆ ಕಟ್ಟಲು ನೀಡುವ ಸಹಾಯ ಧನವನ್ನು ಮಂಜೂರು ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಕ್ಕಾಗಿ ದಕ್ಷಿಣ ಕನ್ನಡ ಜಿಲ್ಲಾಧಿಕಾರಿಯವರಿಗೆ 2005–06 ಮತ್ತು 2006–07ನೇ ಸಾಲಿನಲ್ಲಿ ಬಂದ ಅರ್ಜಿಗಳೆಷ್ಟು;

ಆ) ಆ ಪೈಕಿ ಎಷ್ಟು ಅರ್ಜಿಗಳನ್ನು ಕೇಂದ್ರ ಸರ್ಕಾರಕ್ಕೆ ರವಾನಿಸಲಾಗಿದೆ;

ಇ) ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ಹಾಗೂ ಬಾಕಿ ಇಡಲು ಕಾರಣವೇನು?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು) :

ಅ) 2005–06ನೇ ಸಾಲಿಗೆ ಯಾವುದೇ ಅರ್ಜಿ ಸ್ವೀಕರಿಸಿರುವುದಿಲ್ಲ 149 ಅರ್ಜಿಗಳನ್ನು 2006–07ನೇ ಸಾಲಿನಲ್ಲಿ ಸ್ವೀಕರಿಸಲಾಗಿದೆ.

ಆ) ಭಾರತ ಸರ್ಕಾರಕ್ಕೆ ಅರ್ಜಿಗಳನ್ನು ರವಾನಿಸಲಾಗಿರುವುದಿಲ್ಲ.

ಇ) 149 ಅರ್ಜಿಗಳು ಬಾಕಿ ಇರುತ್ತವೆ. ಈ ಕೆಳಗಿನ ಕಾರಣಗಳಿಗೆ ಅರ್ಜಿಗಳು ಬಾಕಿ ಇರುತ್ತವೆ.

1) ಮಂಗಳೂರು ನಗರಸಭೆಗೆ ಸಂಬಂಧ ಪಟ್ಟ ಅರ್ಜಿಗಳನ್ನು ಮಂಗಳೂರು ನಗರಸಭೆ ಆಯುಕ್ತರಿಗೆ,

2) ಜಿಲ್ಲೆಯ ಗ್ರಾಮೀಣ ಪ್ರದೇಶಗಳಿಗೆ ಸಂಬಂಧಪಟ್ಟ ಅರ್ಜಿಗಳನ್ನು ಆಯಾ ತಾಲ್ಲೂಕು ಪಂಚಾಯತಿಯ ಕಾರ್ಯ ನಿರ್ವಹಣಾ ಅಧಿಕಾರಿಗಳಿಗೆ ಪರಿಶೀಲನೆ ಮತ್ತು ವರದಿ ಸಲ್ಲಿಸುವುದಕ್ಕಾಗಿ ಕಳುಹಿಸಲಾಗಿರುತ್ತದೆ.

1014 (1563) ಶ್ರೀ ಅಂಜನಾಮೂರ್ತಿ (ನೆಲಮಂಗಲ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸಂಪನ್ಮೂಲ ಸಂಗ್ರಹದಲ್ಲಿ ಹೆಚ್ಚಳ ತೆರಿಗೆ ಸೋರಿಕೆಗೆ ತಡೆ ಮತ್ತು ಶೇಕಡ 5 ರಷ್ಟು ಯೋಜನೇತರ ವೆಚ್ಚವನ್ನು ಕಡಿತಗೊಳಿಸುವ ಬಗ್ಗೆ ಖಚಿತ ಕ್ರಿಯಾ ಯೋಜನೆ ಸಿದ್ದಪಡಿಸಲು ತಜ್ಞರ ಕಾರ್ಯಪಡೆಯೊಂದನ್ನು ರಚಿಸಲಾಗಿದೆಯೇ?

ಆ) ಈ ಬಗ್ಗೆ ಸರ್ಕಾರಕ್ಕೆ ವರದಿ ಏನಾದರೂ ಬಂದಿದೆಯೇ?

ಇ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) :

ಅ) ಈ ಬಗ್ಗೆ ಆಯವ್ಯಯ ಪತ್ರದಲ್ಲಿ ಹೇಳಾಗಿದೆ. ಪ್ರಕರಣವು ಇನ್ನೂ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.